ಪ್ರಧಾನ ಹಿರಿಯ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ.ರವರ ನ್ಯಾಯಾಲಯ,
ಶ್ರೀರಂಗಪಟ್ಟಣ.

ಕ್ರಿಮಿನಲ್ ಮೊಕದ್ದಮೆ ಸಂಖ್ಯೆ : **38/2020**

ಚಾ.ಸಾ. :- **25**
ಪ್ರಾ.ಸಾ. :- **09**

| | | |
|---|---|---|
| ಹೆಸರು | : | ವಿನಯ್.ಇ.ವಿ |
| ತಂದೆಯ ಹೆಸರು | : | ವಾಸಪ್ಪ |
| ವಯಸ್ಸು | : | 49 ವರ್ಷ |
| ಉದ್ಯೋಗ | : | ಪಿ.ಐ., ಎಸ್.ಪಿ.ಕಛೇರಿ, ಹಾಸನ |
| ವಾಸಸ್ಥಳ | : | ಹಾಸನ. |

ಪ್ರಮಾಣೀಕರಿಸಲಾದ ದಿನಾಂಕಃ- **13.07.2026.**

ಮುಖ್ಯ ವಿಚಾರಣೆ : ಮಾನ್ಯ ಸ.ಸ.ಅ.ರವರಿಂದ :

ನಾನು 2019 ರ ಅವಧಿಯಲ್ಲಿ ಶ್ರೀರಂಗಪಟ್ಟಣದಲ್ಲಿ ವೃತ್ತ ನಿರೀಕ್ಷಕನಾಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿನಾಂಕಃ 10.02.2019 ರಂದು ನಾನು ಚಾ.ಸಾ-26 ರವರಿಂದ ಕಡತವನ್ನು ಸ್ವೀಕರಿಸಿ ತನಿಖೆ ಮುಂದುವರೆಯಿಸಿರುತ್ತೇನೆ.

ನಂತರ ಅಪಘಾತಕ್ಕೆ ಸಂಬಂಧಿಸಿದಂತೆ 3 ವಾಹನಗಳ ಮಾಲೀಕರಿಂದ ಐ.ಎಂ.ವಿ.ಕಾಯ್ದೆಯಡಿ ನೀಡಿದ್ದ ನೋಟೀಸ್ ಗೆ ಉತ್ತರ ಪಡೆದಿರುತ್ತೇನೆ. ಸದರಿ ಉತ್ತರಗಳನ್ನು ಈಗ ನೋಡುತ್ತಿದ್ದು, ಅವುಗಳನ್ನು ನಿಪಿ-21 ರಿಂದ 23 ಎಂದು ಗುರುತಿಸಲಾಯಿತು. ಆರ್.ಟಿ.ಓ.ಅಧಿಕಾರಿಗಳು ವಾಹನವನ್ನು ಪರಿಶೀಲಿಸಿದ ನಂತರ ವಾಹನಗಳನ್ನು ಬಾಂಡ್ ಪಡೆದು ಬಿಡುಗಡೆ ಮಾಡಿರುತ್ತೇನೆ.

ಅಪಘಾತಕ್ಕೆ ಸಂಬಂಧಿಸಿದಂತೆ 3 ವಾಹನಗಳನ್ನು ಪರಿಶೀಲನೆ ಮಾಡಿ ಐ.ಎಂ.ವಿ.ವರದಿ ಸಲ್ಲಿಸಿದ್ದು ಅದನ್ನು ಸ್ವೀಕರಿಸಿರುತ್ತೇನೆ. ಸದರಿ ಐ.ಎಂ.ವಿ.ವರದಿಯನ್ನು ಈಗ ನೋಡುತ್ತಿದ್ದು, ಅದನ್ನು ನಿಪಿ-24 ಎಂದು ಗುರುತಿಸಲಾಯಿತು.

ಮೈಸೂರಿನ RFSL ನಿಂದ ವರದಿಯನ್ನು ಸ್ವೀಕರಿಸಿರುತ್ತೇನೆ. ಸದರಿ ವರದಿಯನ್ನು ಈಗ ನೋಡುತ್ತಿದ್ದು, ಅದನ್ನು ನಿಪಿ-25 ಎಂದು ಗುರುತಿಸಲಾಯಿತು.

ಮೃತರ ಪಿ.ಎಂ.ವರದಿಯನ್ನು ಸ್ವೀಕರಿಸಿ ಕಡತಕ್ಕೆ ಲಗತ್ತಿಸಿಕೊಂಡಿರುತ್ತೇನೆ. ಸದರಿ ವರದಿಯನ್ನು ಈಗ ನೋಡುತ್ತಿದ್ದು, ಅದನ್ನು ನಿಪಿ-26 ಎಂದು ಗುರುತಿಸಲಾಯಿತು.

ಆರೋಪಿ ಠಾಣೆಗೆ ಹಾಜರಾಗಿದ್ದು, ಅವರಿಗೆ ನೋಟೀಸ್ ಜಾರಿ ಮಾಡಿ ಬಾಂಡ್ ಪಡೆದು ಜಾಮೀನಿನ ಮೇಲೆ ಅವರನ್ನು ಬಿಡುಗಡೆ ಮಾಡಿರುತ್ತೇನೆ.

ನಂತರ, ಪ್ರಕರಣದ ಕಡತವನ್ನು ಪ್ರಕರಣದ ದಿನಚರಿಯೊಂದಿಗೆ ಚಾಸಾ-26 ರವರು ಪಡೆದುಕೊಂಡಿರುತ್ತಾರೆ.

ಆರೋಪಿಯನ್ನು ಸಾಕ್ಷಿಯು ನೋಡಿ ಗುರುತಿಸಿರುತ್ತಾರೆ.

<u>ಪಾಟೀ ಸವಾಲು : ಆರೋಪಿ ಪರ ವಕೀಲರಿಂದ :</u>

ನನ್ನ ಹಿಂದಿನ ತನಿಖಾಧಿಕಾರಿಯವರು ವಾಹನಗಳ ತಪಾಸಣೆ ಮಾಡುವಂತೆ ಮನವಿ ಸಲ್ಲಿಸಿದ್ದರು. ಒಟ್ಟು 3 ವಾಹನಗಳ ಐ.ಎಂ.ವಿ.ವರದಿಗಳನ್ನು ನಾನು ಸ್ವೀಕರಿಸಿರುತ್ತೇನೆ. ಆರೋಪಿ ವಾಹನದ ಟೈರ್ ಸಿಡಿದಿದ್ದರಿಂದ ಅಪಘಾತ ಆಗಿರುತ್ತದೆ ಎಂದರೆ ಸಾಕ್ಷಿ ಐ.ಎಂ.ವಿ.ವರದಿಯಲ್ಲಿ ಆ ರೀತಿ ಬರೆದಿರುವುದಿಲ್ಲ ಎನ್ನುತ್ತಾರೆ.

ತನಿಖಾ ಸಮಯದಲ್ಲಿ ಆರೋಪಿಯ ತಪ್ಪು ಇರುವುದಿಲ್ಲವೆಂದು ಕಂಡು ಬಂದಿರುತ್ತದೆ ಎಂದರೆ ಸರಿಯಲ್ಲ.

ಆರೋಪಿ ಯಾವುದೇ ತಪ್ಪು ಮಾಡದಿದ್ದರೂ ದೂರುದಾರರ ಕುಟುಂಬಕ್ಕೆ ವಿಮೆ ಪರಿಹಾರ ಕೊಡಿಸುವ ಸಲುವಾಗಿ ಸುಳ್ಳು ದಾಖಲಾತಿ ಸೃಷ್ಟಿಸಿ, ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

<u>ಮರು ವಿಚಾರಣೆ **:-**</u> ಇಲ್ಲ**.**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಈ ದಿನ ಬೆರಳಚ್ಚು ಮಾಡಲಾಯಿತು.)

ಓದಿ ಹೇಳಿ ಕೇಳಿ ಸರಿ ಇದೆ ಎಂದು ಓದಲಾಗಿದೆ.

ಪ್ರಧಾನ ಹಿರಿಯ ಸಿಜೆ ಮತ್ತು
ಜೆ.ಎಂ.ಎಫ್.ಸಿ., ಶ್ರೀರಂಗಪಟ್ಟಣ.

**ಸಾಕ್ಷಿದಾರರ ಸಹಿ.**